ಇ) ರೂ. 40.00 ಲಕ್ಷಗಳ ಮೊತ್ತದ ಕಾಮಗಾರಿಯ ಟೆಂಡರ್ ಪ್ರಕ್ರಿಯೆ ಚಾಲನೆಯಲ್ಲಿದೆ. ಟೆಂಡರು ಪ್ರಕ್ರಿಯೆ ಪೂರ್ಣಗೊಳಿಸಿದ ನಂತರ ಕಾಮಗಾರಿ ಪ್ರಾರಂಭಿಸಲಾಗುವುದು.

ಈ) ಸಮುದ್ರ ಕೊರೆತ ಪ್ರತಿಬಂಧಕ ಕಾಮಗಾರಿಗಳಿಗಾಗಿ 2009–10ನೇ ಸಾಲಿಗೆ ರೂ. 786.99 ಲಕ್ಷ ಅನುದಾನ ಆಯವ್ಯಯದಲ್ಲಿ ಒದಗಿಸಲಾಗಿರುತ್ತದೆ.

ಉ) ಪಾವಿನಕುರ್ವಾ ಸಮುದ್ರ ಕೊರೆತದಿಂದ ಸ್ಥಳೀಯ ಜನರಿಗೆ ಹಾನಿಯಾದ ಬಗ್ಗೆ ವರದಿ ಇರುವುದಿಲ್ಲ. ಒಂದು ವೇಳೆ ಬೆಳೆ, ಜನ ಜಾನುವಾರುಗಳಿಗೆ ಹಾನಿ ಸಂಭವಿಸಿದಲ್ಲಿ ಸರ್ಕಾರದ ಮಾರ್ಗಸೂಚಿಯಂತೆ ಕಂದಾಯ ಇಲಾಖಾ ವತಿಯಿಂದ ಪರಿಹಾರ ನೀಡಲಾಗುವುದು.

ಊ) ಸಮುದ್ರ ಕೊರೆತದಿಂದ ಹಾನಿ ಸಂಭವಿಸಿದ ಸಂದರ್ಭದಲ್ಲಿ ವರದಿ ನೀಡಿದಲ್ಲಿ ಸಿ.ಆರ್.ಎಫ್. ಮಾರ್ಗಸೂಚಿಯಂತೆ ಕಂದಾಯ ಇಲಾಖಾ ವತಿಯಿಂದ ಪರಿಹಾರವನ್ನು ನೀಡಲಾಗುವುದು.

518 ಶ್ರೀ ಮಂಜು ಎ. (ಅರಕಲಗೂಡು): ಮಾನ್ಯ ತೋಟಗಾರಿಕೆ ಮತ್ತು ಬಂದೀಖಾನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ಹಸಿಮೆಣಸು ಬೆಳೆಯುವ ರೈತರಿಗೆ ಅನುಕೂಲವಾಗಲು ಅರಕಲಗೂಡು ತಾಲ್ಲೂಕಿನಲ್ಲಿ ಶೀತಲಾಗಾರ ನಿರ್ಮಾಣ ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೇ;

ಆ) ಹಾಗಿದ್ದಲ್ಲಿ, ಶೀತಲಾಗಾರವನ್ನು ಎಂದಿನಿಂದ ಪ್ರಾರಂಭ ಮಾಡಲಾಗುವುದು?

ಶ್ರೀ ಉಮೇಶ್ ವಿ. ಕತ್ತಿ (ತೋಟಗಾರಿಕೆ ಮತ್ತು ಬಂದೀಖಾನೆ ಸಚಿವರು):

ಅ) ಸರ್ಕಾರದ ವತಿಯಿಂದ ಶೀತಲಗೃಹಗಳನ್ನು ನಿರ್ಮಾಣ ಮಾಡುವ ಉದ್ದೇಶ ಇರುವುದಿಲ್ಲ. ಖಾಸಗಿ ಅಥವಾ ಸಹಕಾರಿ ವಲಯದಲ್ಲಿ ಶೀತಲಗೃಹಗಳನ್ನು ನಿರ್ಮಾಣ ಮಾಡಲು ಮುಂದೆ ಬರುವ ಆಸಕ್ತ

ಉದ್ದಿಮೆದಾರರಿಗೆ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ಸಹಾಯಧನ ನೀಡಲಾಗುವುದು.

ಆ) ಉದ್ಭವಿಸುವುದಿಲ್ಲ.

519 ಶ್ರೀ ಮಂಜು ಎ. : ಮಾನ್ಯ ತೋಟಗಾರಿಕೆ ಹಾಗೂ ಬಂದೀಖಾನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ಕಳೆದ ಸಾಲಿನಲ್ಲಿ ಆಲೂಗಡ್ಡೆ ಬೆಳೆಯುವ ರೈತರಿಗೆ ತೊಂದರೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ) ಹಾಗಿದ್ದಲ್ಲಿ, ಹಾಸನ ಜಿಲ್ಲೆಯಲ್ಲಿ ಪರಿಹಾರ ನೀಡಿರುವ ಹಣವೆಷ್ಟು; (ತಾಲ್ಲೂಕುವಾರು ವಿವರ ನೀಡುವುದು)

ಇ) ಇಲ್ಲದಿದ್ದಲ್ಲಿ, ಯಾವ ಕಾರಣಕ್ಕಾಗಿ ನೀಡಿರುವುದಿಲ್ಲ;

ಈ) ಪರಿಹಾರ ನೀಡುವ ಸಂದರ್ಭದಲ್ಲಿ ಅನುಸರಿಸಲಾಗುವ ಮಾನದಂಡವೇನು?

ಶ್ರೀ ಉಮೇಶ್ ವಿ. ಕತ್ತಿ (ತೋಟಗಾರಿಕೆ ಹಾಗೂ ಬಂದೀಖಾನೆ ಸಚಿವರು):

ಅ) ಹೌದು.

ಆ) 2008–09ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಹಾಸನ ಜಿಲ್ಲೆಯಲ್ಲಿ ಆಲೂಗೆಡ್ಡೆ ಬೆಳೆದ ರೈತರಿಗೆ ರೂ. 10.13 ಕೋಟಿಗಳ ಬೆಳೆ ನಷ್ಟ ಪರಿಹಾರವನ್ನು ಮಂಜೂರು ಮಾಡಲಾಗಿದ್ದು, ರೂ. 9.35 ಕೋಟಿಗಳ ಮೊಬಲಗನ್ನು ಕಂದಾಯ ಇಲಾಖೆ ಹಾಸನ ಜಿಲ್ಲಾಧಿಕಾರಿಗಳಿಗೆ ಬಿಡುಗಡೆ ಮಾಡಿದೆ. ಪ್ರಕೃತಿ ವಿಕೋಪ ಪರಿಹಾರ ನಿಧಿಯಡಿ ರೂ. 5.69 ಕೋಟಿಗಳ ಪರಿಹಾರ ವಿತರಿಸಲಾಗಿದೆ. ಕಂದಾಯ ಇಲಾಖೆ ಬೆಳೆ ನಷ್ಟ ಪರಿಹಾರ ಒದಗಿಸುತ್ತಿದ್ದು, ವಿತರಣಾ ಕಾರ್ಯ ಪ್ರಗತಿಯಲ್ಲಿದೆ. ತಾಲ್ಲೂಕುವಾರು ವಿವರ ಕೆಳಗಿನಂತಿದೆ.